ಪತ್ರಿಕಾ ತುಣುಕುಗಳು PAPER CLIPPINGS
ದಿನಾಂಕ : DATE : 03/05/2019
ಶಾಖೆ / ವಿಷಯ: DEPARTMENT / SUBJECT: KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕೆಯ ಹೆಸರು : NAME OF THE NEWS PAPER : ವಿಜಯವಾಣಿ

# 63 ಸ್ಥಳೀಯ ಸಂಸ್ಥೆಗಳಿಗೆ 29ಕ್ಕೆ ಚುನಾವಣೆ

## 8 ನಗರಸಭೆ, 33 ಪುರಸಭೆ, 22 ಪಟ್ಟಣ ಪಂಚಾಯಿತಿ | 31ಕ್ಕೆ ಮತ ಎಣಿಕೆ | 202 ಗ್ರಾಪಂಗೆ ಉಪಚುನಾವಣೆ

3-5-19

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ರಾಜ್ಯದಲ್ಲಿ ಲೋಕಸಭಾ ಚುನಾವಣೆ ಮುಗಿಯುತ್ತಿದ್ದಂತೆಯೇ 63 ನಗರ ಸ್ಥಳೀಯ ಸಂಸ್ಥೆಗಳಿಗೆ ರಾಜ್ಯ ಚುನಾವಣಾ ಆಯೋಗ ದಿನಾಂಕ ಘೋಷಿಸಿದ್ದು, ಮೇ 29ರಂದು ನಡೆಯಲಿದೆ.

2019ರ ಮಾರ್ಚ್‌ನಿಂದ ಜುಲೈ 2019ರ ಅವಧಿಗೆ ಮುಕ್ತಾಯವಾಗುವ ಒಟ್ಟು 103 ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಯಬೇಕಿದೆ. ಆದರೆ, ಕ್ಷೇತ್ರ ಪುನರ್‌ವಿಂಗಡಣೆ, ಮೀಸಲಾತಿ ವಿಚಾರವಾಗಿ 39 ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿರುವ ಹಿನ್ನೆಲೆಯಲ್ಲಿ 63 ಸಂಸ್ಥೆಗಳಿಗೆ ಚುನಾವಣೆ ನಡೆಯಲಿದೆ ಎಂದು ರಾಜ್ಯ ಚುನಾವಣಾ ಆಯೋಗದ ಆಯುಕ್ತ ಪಿ.ಎನ್. ಶ್ರೀನಿವಾಸಾಚಾರಿ ಸುದ್ದಿಗೋಷ್ಠಿಯಲ್ಲಿ ಗುರುವಾರ ತಿಳಿಸಿದರು.

**ಎಷ್ಟು ಕ್ಷೇತ್ರಗಳಿಗೆ ಚುನಾವಣೆ?:** 8 ನಗರಸಭೆ, 33 ಪುರಸಭೆ ಹಾಗೂ 22 ಪಟ್ಟಣ ಪಂಚಾಯಿತಿಗಳಿಗೆ ಚುನಾವಣೆ ನಡೆಯಲಿದೆ. 10 ಕ್ಷೇತ್ರಗಳ ತಾಲೂಕು ಪಂಚಾಯಿತಿ ಸದಸ್ಯ ಸ್ಥಾನಗಳಿಗೆ, 202 ಗ್ರಾಮ ಪಂಚಾಯತಿ ಸದಸ್ಯ ಸ್ಥಾನಗಳಿಗೆ ಉಪ ಚುನಾವಣೆ ನಡೆಯಲಿದೆ.

ಮೇ 31ರಂದು ಆಯಾ ತಾಲೂಕು ಕೇಂದ್ರಗಳಲ್ಲಿ ಮತ ಎಣಿಕೆ ನಡೆಯಲಿದ್ದು, ಚುನಾವಣೆ ನಡೆಯುವ ಕ್ಷೇತ್ರ ವ್ಯಾಪ್ತಿಯಲ್ಲಿ ಗುರುವಾರದಿಂದಲೇ ನೀತಿ ಸಂಹಿತೆ ಜಾರಿಗೆ ಬರಲಿದ್ದು, ಮೇ 31ರವರೆಗೂ ಅನ್ವಯವಾಗುತ್ತದೆ ಎಂದು ಹೇಳಿದರು.

**ಚುನಾವಣಾ ವೆಚ್ಚ ಮಿತಿ:** ಸ್ಥಳೀಯ ಸಂಸ್ಥೆಗಳಿಗೆ ನಡೆಯುತ್ತಿರುವ ಈ ಚುನಾವಣೆಯಲ್ಲಿ ಸ್ಪರ್ಧೆ ಮಾಡಬಯಸುವ ಅಭ್ಯರ್ಥಿಗಳಿಗೆ ಗರಿಷ್ಠ ವೆಚ್ಚ ಮಿತಿ ನಿಗದಿ ಮಾಡಲಾಗಿದೆ. ನಗರಸಭೆಗೆ ಸ್ಪರ್ಧಿಸುವವರು 2 ಲಕ್ಷ, ಪುರಸಭೆ 1.50 ಲಕ್ಷ ಹಾಗೂ ಪಟ್ಟಣ ಪಂಚಾಯಿತಿಗೆ ಸ್ಪರ್ಧಿಸುವ ಅಭ್ಯರ್ಥಿಗಳು 1 ಲಕ್ಷ ರೂ. ಖರ್ಚು ಮಾಡಬಹುದು.

**14.74 ಲಕ್ಷ ಮತದಾರರು:** 1,646 ಮತಗಟ್ಟೆಗಳನ್ನು ಸ್ಥಾಪಿಸಿದ್ದು, 7.37 ಲಕ್ಷ ಪುರುಷರು, 7.36 ಲಕ್ಷ ಮಹಿಳೆಯರು,



181 ಇತರರು ಸೇರಿ 14.74 ಲಕ್ಷ ಮತದಾರರಿದ್ದಾರೆ. ಒಟ್ಟು 8,230 ಮತಗಟ್ಟೆ ಸಿಬ್ಬಂದಿಯನ್ನು ನೇಮಕ ಮಾಡಲಾಗಿದ್ದು, 1,998 ಮತಯಂತ್ರಗಳು ಹಾಗೂ ಕಂಟ್ರೋಲ್ ಯೂನಿಟ್‌ಗಳನ್ನು ಚುನಾವಣೆಗೆ ಬಳಕೆ ಮಾಡಲಾಗುತ್ತಿದೆ ಎಂದರು.

**ವೀಕ್ಷಕರ ನೇಮಕ:** ಚುನಾವಣೆ ನಡೆಯಲಿರುವ ನಗರ ಸ್ಥಳೀಯ ಸಂಸ್ಥೆಗಳಿಗೆ ಐಎಎಸ್ ಅಧಿಕಾರಿಗಳನ್ನು ವಿಶೇಷ ವೀಕ್ಷಕರನ್ನಾಗಿ ನೇಮಕ ಮಾಡಲಾಗಿದೆ. ಕೆಎಎಸ್ ಅಧಿಕಾರಿಯನ್ನು ಸಾಮಾನ್ಯ ವೀಕ್ಷಕರಾಗಿ, ರಾಜ್ಯ ಲೆಕ್ಕ ಪರಿಶೋಧನೆ ಹಾಗೂ ಲೆಕ್ಕಪತ್ರ ಇಲಾಖೆಯ ಜಂಟಿ ನಿಯಂತ್ರಕ ಹಾಗೂ ಉಪ ನಿಯಂತ್ರಕರನ್ನು ಚುನಾವಣೆ ವೆಚ್ಚ ವೀಕ್ಷಕರನ್ನಾಗಿ ನೇಮಕ ಮಾಡಲಾಗಿದೆ ಎಂದರು.

**ಇಲ್ಲಿ ಉಪ ಚುನಾವಣೆ:** ನಾನಾ ಕಾರಣದಿಂದ ತೆರವಾಗಿರುವ ಬೆಂಗಳೂರಿನ ಸಗಾಯಿಪುರ, ಕಾವೇರಿಪುರ, ತುಮಕೂರು ಮಹಾನಗರ ಪಾಲಿಕೆಯ ವಾರ್ಡ್-22, ಬೆಂಗಳೂರಿನ ಹೆಬ್ಬಗೋಡಿ ನಗರಸಭೆಯ ವಾರ್ಡ್-26, ಬೆಳಗಾವಿ ಸದಲಗ ಪುರಸಭೆಯ ವಾರ್ಡ್-19 ಹಾಗೂ ಮುಗಳಖೋಡ ಪುರಸಭೆಯ ವಾರ್ಡ್-2 ರ ನಗರ ಸ್ಥಳೀಯ ಸಂಸ್ಥೆಗಳಿಗೆ ಉಪ ಚುನಾವಣೆ ನಡೆಯಲಿದೆ ಎಂದು ತಿಳಿಸಿದರು. ಕುಂದಗೋಳ ವಿಧಾನಸಭೆ ಉಪಚುನಾವಣೆ ಹಿನ್ನೆಲೆಯಲ್ಲಿ ಈ ಕ್ಷೇತ್ರ ವ್ಯಾಪ್ತಿಯಲ್ಲಿ ಯಾವುದೇ ನಗರ ಸ್ಥಳೀಯ ಸಂಸ್ಥೆ ಚುನಾವಣೆ ಘೋಷಣೆಯಾಗಿಲ್ಲ.

### ಎಲ್ಲೆಲ್ಲಿ ಚುನಾವಣೆ ನಡೆಯಲ್ಲ?

ರಾಮನಗರ, ಕೊಡಗು, ಬೆಳಗಾವಿ, ಕಲಬುರಗಿ ಜಿಲ್ಲೆಗಳ ಕೆಲ ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸಲು ಬಾಕಿ ಇದ್ದರೂ ಹೈಕೋರ್ಟ್‌ನಲ್ಲಿ ಪ್ರಕರಣ ಇರುವುದಿರಂದ ಈ ಹಂತದಲ್ಲಿ ಚುನಾವಣೆ ನಡೆಯುತ್ತಿಲ್ಲ ಎಂದು ಶ್ರೀನಿವಾಸಾಚಾರಿ ತಿಳಿಸಿದರು.

### ಮುಖ್ಯಾಂಶಗಳು

» ಗ್ರಾಮ ಪಂಚಾಯಿತಿ ಚುನಾವಣೆ ನಡೆಯುವ ವ್ಯಾಪ್ತಿಯಲ್ಲಿ ಮೇ 13ರಿಂದ 31ರವರೆಗೆ ಪಾನ ನಿಷೇಧ ಇರಲಿದೆ.

» ನಗರ ಸ್ಥಳೀಯ ಸಂಸ್ಥೆಗಳಿಗೆ ಇವಿಎಂ ಬಳಕೆ ಮಾಡಲಾಗುತ್ತಿದೆ. ಆದರೆ; ವಿ.ವಿ.ಪ್ಯಾಟ್ ಬಳಕೆ ಇಲ್ಲ.

» ಗ್ರಾಮ ಪಂಚಾಯಿತಿ ಚುನಾವಣೆಗೆ ಬ್ಯಾಲೆಟ್ ಪೇಪರ್ ಬಳಕೆ ಮಾಡಲಾಗುವುದು.

### ಪಂಚಾಯಿತಿ ಉಪ ಚುನಾವಣೆ

ವಿವಿಧ ಕಾರಣಗಳಿಂದ ತೆರವುಗೊಂಡಿರುವ ಒಟ್ಟು 8 ತಾಲೂಕು ಪಂಚಾಯತಿಗಳ 10 ಕ್ಷೇತ್ರಗಳ ಸದಸ್ಯ ಸ್ಥಾನಗಳಿಗೆ ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ತೆರವುಗೊಂಡಿರುವ 202 ಸದಸ್ಯ ಸ್ಥಾನಗಳಿಗೆ ಮೇ 29ರಂದೇ ಉಪ ಚುನಾವಣೆ ನಡೆಯುತ್ತದೆ. ಜಿಲ್ಲಾಧಿಕಾರಿಗಳು ಮೇ 13 ಅಧಿಸೂಚನೆ ಹೊರಡಿಸಲಿದ್ದು, ಮೇ 16ರಂದು ನಾಮಪತ್ರ ಸಲ್ಲಿಕೆಯ ಕೊನೇ ದಿನವಾಗಿದೆ. ಮೇ 17ರಂದು ಪರಿಶೀಲನೆ ನಡೆಯಲಿದ್ದು, ಮೇ 20ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ.

### 26 ಸದಸ್ಯರ ಸದಸ್ಯತ್ವ ರದ್ದು

ಆಸ್ತಿ ವಿವರ ಸಲ್ಲಿಸದ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಹಾಗೂ ಗ್ರಾಮ ಪಂಚಾಯತ್‌ಗಳ ಒಟ್ಟು 26 ಸದಸ್ಯರ ಸದಸ್ಯತ್ವವನ್ನು ರದ್ದು ಮಾಡಲಾಗಿದೆ. ಅಲ್ಲದೆ, ಈ ಬಾರಿಯೂ ಮತದಾರರಿಗೆ ಅಭ್ಯರ್ಥಿಯ ಹಿನ್ನೆಲೆ ತಿಳಿಯುವ ಉದ್ದೇಶದಿಂದ ಪ್ರತಿಯೊಬ್ಬ ಅಭ್ಯರ್ಥಿಯು ನಾಮಪತ್ರದೊಂದಿಗೆ ತನ್ನ ಹಿನ್ನೆಲೆ, ಚರಾಸ್ತಿ ಮತ್ತು ಸ್ಥಿರಾಸ್ತಿ, ಸ್ವವಿವರ, ವಿದ್ಯಾರ್ಹತೆ, ಆದಾಯದ ಮೂಲಗಳನ್ನು ಪರಿಷ್ಕೃತ ನಮೂನೆಯಲ್ಲಿ ಘೋಷಣೆ ಮಾಡಬೇಕು ಹಾಗೂ ಪ್ರಮಾಣ ಪತ್ರ ಸಲ್ಲಿಸಬೇಕು.

### ಚುನಾವಣೆ ನಡೆಯುವ ಸ್ಥಳೀಯ ಸಂಸ್ಥೆಗಳು

ಆನೇಕಲ್, ದೇವನಹಳ್ಳಿ, ನೆಲಮಂಗಲ, ಹಿರಿಯೂರು, ಮೊಳಕಾಲ್ಮೂರು, ಹೊಳಲ್ಕೆರೆ, ಹರಿಹರ, ಬಂಗಾರಪೇಟೆ, ಶ್ರೀನಿವಾಸಪುರ, ಮಾಲೂರು, ಶಿಡ್ಲಘಟ್ಟ, ಬಾಗೇಪಲ್ಲಿ, ಸಾಗರ, ಶಿಕಾರಿಪುರ, ಶಿರಾಳಕೊಪ್ಪ, ಸೊರಬ, ಹೊಸನಗರ, ತಿಪಟೂರು, ಪಾವಗಡ, ಕುಣಿಗಲ್, ತುರುವೇಕೆರೆ, ನಂಜನಗೂಡು, ಕೆ.ಆರ್.ನಗರ, ಬನ್ನೂರು, ಕಡೂರು, ಕೊಪ್ಪ, ಶೃಂಗೇರಿ, ಮೂಡಿಗೆರೆ, ನರಸಿಂಹರಾಜಪುರ, ಮೂಲ್ಕಿ, ಮೂಡಬಿದಿರೆ, ಸುಳ್ಯ, ಆಲೂರು, ಅರಕಲಗೂಡು, ಮಳವಳ್ಳಿ, ಕೆ.ಆರ್.ಪೇಟೆ, ಶ್ರೀರಂಗಪಟ್ಟಣ, ಗುಂಡ್ಲುಪೇಟೆ, ಯಳಂದೂರು, ಹನೂರು, ತಾಳೀಕೋಟೆ, ಬಸವನಬಾಗೇವಾಡಿ, ಇಂಡಿ, ನವಲಗುಂದ, ಕಲಘಟಗಿ, ಅಳ್ನಾವರ, ಮುಂಡರಗಿ, ನರಗುಂದ, ಬ್ಯಾಡಗಿ, ಶಿಗ್ಗಾವಿ, ಭಟ್ಕಳ, ಹೊನ್ನಾವರ, ಸಿದ್ದಾಪುರ, ಬಸವಕಲ್ಯಾಣ, ಬಾಲ್ಕಿ, ಹುಮನಾಬಾದ್, ಚಿಟಗುಪ್ಪ, ಔರಾದ್, ಕಮಲಾಪುರ, ಸಂಡೂರು, ಎಚ್.ಹಡಗಲಿ, ಹರಪನಹಳ್ಳಿ, ಶಹಾಪುರ.